ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 11/4/21

# ಪರೀಕ್ಷೆ ನಿಲ್ಲಲ್ಲ, ಬೇಸಿಗೆ ರಜೆ ಇರಲ್ಲ

## ಪದವಿ, ಸ್ನಾತಕೋತ್ತರ ಶೈಕ್ಷಣಿಕ ಚಟುವಟಿಕೆ ನಿರಂತರ ಮುಂದುವರಿಕೆ

**ವಿಕ ಸುದ್ದಿಲೋಕ** ಬೆಂಗಳೂರು

ರಾಜ್ಯದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪರೀಕ್ಷೆಗಳು ನಿಗದಿಯಂತೆ ನಡೆಯಲಿವೆ. ಆದರೆ, ಈ ಬಾರಿ ವಿದ್ಯಾರ್ಥಿಗಳಿಗೆ ಬೇಸಿಗೆ ರಜೆ ಇರುವುದಿಲ್ಲ ಎಂದು ಉನ್ನತ ಶಿಕ್ಷಣ ಸಚಿವರೂ ಆದ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಸ್ಪಷ್ಟಪಡಿಸಿದ್ದಾರೆ.



ಸಂಸ್ಕೃತ ವಿವಿ ಘಟಿಕೋತ್ಸವದ ಬಳಿಕ ಮಾತನಾಡಿದ ಅವರು, ''ಸೆಮಿಸ್ಟರ್ ಪರೀಕ್ಷೆಗಳು ಪೂರ್ಣಗೊಳ್ಳುತ್ತಿದ್ದಂತೆಯೇ 2021-22ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ಆರಂಭಿಸುತ್ತೇವೆ,'' ಎಂದು ಮಾಹಿತಿ ನೀಡಿದರು.

''ಕೋವಿಡ್‌ನಿಂದಾಗಿ 2021-22 ನೇ ಸಾಲಿನ ಶೈಕ್ಷಣಿಕ ವರ್ಷದ ಯಾವ ಚಟುವಟಿಕೆಗಳಲ್ಲೂ ವ್ಯತ್ಯಯ ಆಗುವುದಿಲ್ಲ. ಸೆಮಿಸ್ಟರ್ ಪರೀಕ್ಷೆಗಳು ಮುಗಿಯುತ್ತಿದ್ದಂತೆ, ಒಂದೆಯೇ ತರಗತಿಗಳು ಆರಂಭವಾಗುತ್ತವೆ. ಆಫ್‌ಲೈನ್ ಮತ್ತು ಆನ್‌ಲೈನ್ ತರಗತಿಗಳಲ್ಲಿ ಯಾವುದಾದರೂ ಒಂದು ತರಗತಿಗೆ ಹಾಜರಾಗಲೇ ಬೇಕು. ಮೊದಲು ಆನ್‌ಲೈನ್ ತರಗತಿಗಳನ್ನು ಪ್ರಾರಂಭಿಸಲಾಗುವುದು,'' ಎಂದರು.

''ಕಾಲೇಜಿಗೆ ಬರುವವರಿಗೆ ಕೋವಿಡ್ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಸ್ಯಾನಿಟೈಸೇಷನ್, ಕೋವಿಡ್ ಪರೀಕ್ಷೆ, ದೈಹಿಕ ಅಂತರ ಪಾಲನೆ ಹಾಗೂ ಮಾಸ್ಕ್ ಧರಿಸುವುದು ಕಡ್ಡಾಯವಾಗಿರುತ್ತದೆ,'' ಎಂದರು.

### 1.60 ಲಕ್ಷ ಉಚಿತ ಟ್ಯಾಬ್

''ಸಮಗ್ರ ಕಲಿಕಾ ನಿರ್ವಹಣಾ ವ್ಯವಸ್ಥೆ (ಎಲ್‌ಎಂಎಸ್) ಜಾರಿಯಾಗಿದೆ. ವಿದ್ಯಾರ್ಥಿಗಳು ತಾವು ಇರುವ ಸ್ಥಳದಲ್ಲೇ ಕುಳಿತು ಪಾಠ, ಪ್ರವಚನ ಆಲಿಸಲು ಅನುಕೂಲವಾಗುವಂತೆ ಈ ವರ್ಷ ಸರಕಾರಿ ಕಾಲೇಜುಗಳಲ್ಲಿ ಕಲಿಯುತ್ತಿರುವ 1.60 ಲಕ್ಷ ವಿದ್ಯಾರ್ಥಿಗಳಿಗೆ ಟ್ಯಾಬ್ಲೆಟ್ ನೀಡಲಾಗಿದೆ. ಕಳೆದ ವರ್ಷ 1.10 ಲಕ್ಷ ವಿದ್ಯಾರ್ಥಿಗಳಿಗೆ ಕೊಡಲಾಗಿತ್ತು. ತರಗತಿಗಳನ್ನು ಸ್ಟುಡಿಯೋಗಳಾಗಿ ಪರಿವರ್ತಿಸಲಾಗಿದ್ದು, ಎಲ್ಲವೂ ಸ್ಮಾರ್ಟ್ ಕ್ಲಾಸ್ ರೂಮ್‌ಗಳಾಗಿವೆ,'' ಎಂದು ಅವರು ತಿಳಿಸಿದರು. ಕಂಟೆಂಟ್ ಅಪ್ಲೋಡ್ ಸಮಸ್ಯೆ ಪರಿಹರಿಸಲಾಗುವುದು ಎಂದರು.

ರಾಜ್ಯದಲ್ಲಿ ಮೇ 24 ರಿಂದ ಪಿಯುಸಿ ಪರೀಕ್ಷೆಗಳು, ಜೂನ್ 20 ರಿಂದ ಎಸ್ಎಸ್ಎಲ್‌ಸಿ ಪರೀಕ್ಷೆಗಳು ಆರಂಭವಾಗುತ್ತವೆ. ಏಪ್ರಿಲ್‌ನಲ್ಲಿ ಕೊರೊನಾ ಇನ್ನೂ ಹೆಚ್ಚಾಗುತ್ತದೆ, ಮೇನಲ್ಲಿ ಕಡಿಮೆಯಾಗುತ್ತದೆ ಎಂಬ ವರದಿಗಳಿವೆ. ಕೊರೊನಾ ಜತೆ ಬದುಕು ಅನಿವಾರ್ಯವಾಗಿದೆ. ಕೊರೊನಾ ನಡುವೆ ಪರೀಕ್ಷೆ ನಡೆಸುವುದು ನಮ್ಮ ಕರ್ತವ್ಯ. ಕೊರೊನಾ ನಡುವೆ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳೇ ನಿಜವಾದ ಕೊರೊನಾ ವಾರಿಯರ್ಸ್.

**-ಎಸ್. ಸುರೇಶ್ ಕುಮಾರ್**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ